ದಿನಾಂಕ: 02.01.2021 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿಗಳು
2. ಶ್ರೀ ನಾರಾಯಣಿ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ ಸ್ಮಿತಾ, ಕಂದಾಯ ಪರಿವೀಕ್ಷಕರು,
5. ಶ್ರೀ ರಮೇಶ್, ಬೆಸ್ಕಾಂ
6. ಶ್ರೀ ಬಿ.ಕೆ. ಶಂಕರ್, ಸಹಾಯಕ ಅಭಿಯಂತರರು, ಬೆಸ್ಕಾಂ
7. ಶ್ರೀ ವೆಂಕಟೇಶ್, ಕಂದಾಯ ಇಲಾಖೆ
8. ಶ್ರೀ ಗಂಗಯ್ಯ, ಎಲ್.ಜಿ. ಸದಸ್ಯರು,
9. ಶ್ರೀ ಅನಿಲ್ ರಂಗಣ್ಣ, ಸದಸ್ಯರು,
10. ಶ್ರೀ ಕೆ.ಉಮಾಶಂಕರ್, ಸದಸ್ಯರು,
11. ಶ್ರೀ ಸುಬ್ರಮಣಿ, ಸದಸ್ಯರು
12. ಶ್ರೀ ವಿನಾಯಕ ಸದಸ್ಯರು
13. ಶ್ರೀ ಶ್ರೀನಿವಾಸ್.ಎ. ಸದಸ್ಯರು
14. ಶ್ರೀ ಮಾರುತಿ.ಬಿ.ಹೆಚ್. ಸದಸ್ಯರು,

ದಿನಾಂಕ: 19.12.2020 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 02.01.2021ರಂದು ಬೆಳಗ್ಗೆ 3.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ **ಕೇತಮಾರನಹಳ್ಳಿ ಸಮುಧಾಯ ಭವನ, ಶಾರದಾ ಕಾಲೊನಿ, ಕಾಮಾಕ್ಷಿಪಾಳ್ಯ,** ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

01. ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಬಸವೇಶ್ವರನಗರದ 80 ಅಡಿ ರಸ್ತೆಯಲ್ಲಿ ಮೋರ್ ಸೂಪರ್ ಮಾರ್ಕೆಟ್ ರವರು ಪಾದಚಾರಿ ಮಾರ್ಗವನ್ನು ಅತಿಕ್ರಮ ಮಾಡಿಕೊಂಡು ಸಂಚಾರಕ್ಕೆ ಅಡ್ಡಿ ಉಂಟು ಮಾಡಿದ್ದು, ಸದರಿ ಮಾಲೀಕರ ವಿರುದ್ಧ ಕ್ರಮ ಕೈಗೊಂಡು ದಂಡ ವಿದಿಸುವಂತೆ ಸೂಚಿಸಿದರು.

02. ಸದಸ್ಯರಾದ ಶ್ರೀ ಅನಿಲ್ ರಂಗಣ್ಣ ರವರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಯು.ಜಿ.ಕೆಲಸ ಮಾಡುತ್ತಿರುವುದನ್ನು ವೇಗವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು. ಸಭೆಯಲ್ಲಿದ್ದ ಸಹಾಯಕ ಅಭಿಯಂತರರಾದ ಶ್ರೀ ರಮೇಶ್ ರವರು ಮಾತನಾಡಿ ತುರ್ತಾಗಿ ಕೆಲಸ ಮುಗಿಸಿಕೊಡುತ್ತೇವೆ ಎಂದು ಸಭೆಗೆ ತಿಳಿಸಿದರು.

03. ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಮಾತನಾಡುತ್ತಾ, ವಾರ್ಡಿಗೆ ಅವಶ್ಯಕವಿರುವ ಪೌರಕಾರ್ಮಿಕರ ನೇಮಕಾತಿ ಕುರಿತು ನೋಡಲ್ ಅಧಿಕಾರಿಗಳಿಗೆ ತಿಳಿಸಿದರು. ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

04. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಪಾಲಿಕೆಯ ಘನತ್ಯಾಜ್ಯ ವಿಭಾಗದ ಮುಖ್ಯ ಅಭಿಯಂತರರಿಗೆ ಮಾತನಾಡಿ ಪೌರಕಾರ್ಮಿಕರನ್ನು ಹೆಚ್ಚುವರಿಯಾಗಿ ನೇಮಕ ಮಾಡಿಕೊಳ್ಳಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

**ಪು.ತಿ.ನೋ.**

05. ಕಂದಾಯ ಪರಿವೀಕ್ಷಕರು ಮಾತನಾಡುತ್ತಾ ವಾರ್ಡಿನಲ್ಲಿ ಬಾಕಿ ಇರುವ ಕಂದಾಯ ಪಾವತಿದಾರರ ಕುರಿತು ಸಭೆಗೆ ತಿಳಿಸಿದರು. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ಮಾಡಿ ಬಿ.ಬಿ.ಎಂ.ಪಿ.ಗೆ ತೆರಿಗೆ ಸಂಗ್ರಹಿಸುವಂತೆ ಸಭೆಗೆ ತಿಳಿಸಿದರು.

06. ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಪೋಲಿಸ್ ಸಿಬ್ಬಂದಿಗೆ ತಿಳಿಸುತ್ತಾ, ಬೇಕರಿ ಹಾಗೂ ಕಾಂಡಿಮೆಂಟ್ಸ್ ಗಳಲ್ಲಿ ಬೀಡಿ ಮತ್ತು ಸಿಗರೇಟ್ ಸೇವನೆಯನ್ನು ಸಾರ್ವಜನಿಕ ಸ್ಥಳದಲ್ಲಿ ಮಾಡದಂತೆ ಕ್ರಮ ವಹಿಸಲು ಪೋಲಿಸ್ ಇಲಾಖೆಗೆ ಸೂಚಿಸಿದರು.

07. ಸದಸ್ಯರಾದ ಶ್ರೀ ಅನಿಲ್ ರಂಗಣ್ಣ ಮಾತನಾಡುತ್ತಾ ಶ್ರೀರಾಮನಗರದಲ್ಲಿ ಪುಂಡರ ಹಾವಳಿ ಹೆಚ್ಚಾಗಿದ್ದು, ಸದರಿ ರವರ ಮೇಲೆ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸಭೆಗೆ ತಿಳಿಸಿದರು. ಅದರಂತೆ ನೋಡಲ್ ಅಧಿಕಾರಿಗಳು ಪೋಲಿಸ್ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು.

08. ಕರೇಕಲ್ಲು 8ನೇ ಅಡ್ಡ ರಸ್ತೆಯಲ್ಲಿ ಬಾರಿ ವಾಹನಗಳ ಸಂಚಾರದಿಂದ ಪಾದಚಾರಿ ಮಾರ್ಗ ಹಾಳಾಗಿದ್ದು, ಇದನ್ನು ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 101